# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 365
2. ಸದಸ್ಯರ ಹೆಸರು : ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
3. ಉತ್ತರಿಸಬೇಕಾದ ದಿನಾಂಕ : 15-02-2024
4. ಉತ್ತರಿಸುವವರು : ಉಪ ಮುಖ್ಯಮಂತ್ರಿಗಳು

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೆಂಗಳೂರು ಮೆಟ್ರೋ ಪ್ರಯಾಣಿಕರ ಅನುಕೂಲಕ್ಕಾಗಿ ಕೈಗೊಂಡಿರುವ ಕ್ರಮಗಳೇನು: | ಬೆಂಗಳೂರು ಮೆಟ್ರೋ ರೈಲು ಪ್ರಯಾಣಿಕರ ಅನುಕೂಲಕ್ಕಾಗಿ ಈ ಕೆಳಗಿನ ಸೌಲಭ್ಯಗಳನ್ನು ಒದಗಿಸಲಾಗಿದೆ.<br>1) ಪ್ರಯಾಣಿಕರಿಗೆ ವಿಶ್ವಾಸಾರ್ಹ ಮೆಟ್ರೋ ರೈಲು ಸೇವೆ.<br>2) ಕುಡಿಯುವ ನೀರು.<br>3) ಎಸ್ಕಲೇಟರ್‌ಗಳು.<br>4) ಲಿಫ್ಟ್.<br>5) ಪುರುಷರು, ಮಹಿಳೆಯರು ಮತ್ತು ಅಂಗವಿಕಲರಿಗಾಗಿ ಪ್ರತ್ಯೇಕ ಶೌಚಾಲಯಗಳು.<br>6) ವೀಲ್‌ಚೇರ್ ಸೌಲಭ್ಯ.<br>7) ಪ್ರಥಮ ಚಿಕಿತ್ಸಾ ಉಪಕರಣಗಳು.<br>8) ಗಾಲಿಕುರ್ಚಿ ಚಲನೆಗಾಗಿ ಇಳಿಜಾರುಗಳು.<br>9) ನಿಲ್ದಾಣದಲ್ಲಿ ಫಲಕಗಳು.<br>10) ಪ್ರಮುಖ ನಿಲ್ದಾಣಗಳಲ್ಲಿ ರಸ್ತೆ ದಾಟುವ ಸೌಲಭ್ಯ.<br>11) QR ಕೋಡ್ ಟಿಕೆಟಿಂಗ್ ಸೌಲಭ್ಯ.<br>12) ಮಹಿಳೆಯರಿಗೆ ಮೊದಲ ಕೋಚ್‌ನ ಮೀಸಲಾತಿ. ರೈಲಿನೊಳಗೆ ಹಿರಿಯ ನಾಗರೀಕರು, ಗರ್ಭಿಣಿಯರು ಮತ್ತು ವೀಲ್‌ಚೇರ್‌ಗಾಗಿ ನಿಗದಿತ ಸ್ಥಳ/ಆಸನ.<br>13) ಮಾಹಿತಿಗಾಗಿ ರೈಲಿನೊಳಗೆ ಪ್ರಕಟಣೆ/ಪ್ರದರ್ಶನ. |
| ಆ) | ಮೆಟ್ರೋ ಪ್ರಯಾಣಿಕರಿಗೆ ತುರ್ತು ಸಂದರ್ಭಗಳಲ್ಲಿ ವೈದ್ಯಕೀಯ ಸೌಲಭ್ಯಗಳನ್ನು ಒದಗಿಸಲು ಅಗತ್ಯ ಸಿಬ್ಬಂದಿಗಳನ್ನು ನೇಮಿಸಿಕೊಳ್ಳಲಾಗಿದೆಯೇ: | ತುರ್ತು ಸಂದರ್ಭಗಳಲ್ಲಿ ಪ್ರಯಾಣಿಕರಿಗೆ ಪ್ರಥಮ ಚಿಕಿತ್ಸೆ ನೀಡಲು ಎಲ್ಲಾ ಮೆಟ್ರೋ ನಿಲ್ದಾಣಗಳಲ್ಲಿ ಪ್ರಥಮ ಚಿಕಿತ್ಸಾ ಪೆಟ್ಟಿಗೆಯನ್ನು ನೀಡಲಾಗಿರುತ್ತದೆ ಮತ್ತು ಪ್ರಥಮ ಚಿಕಿತ್ಸೆ ನೀಡಲು ವ್ಯವಸ್ಥೆಯನ್ನು ಮಾಡಲಾಗಿದೆ. ಆಂಬುಲೆನ್ಸ್‌ಗಳ ದೂರವಾಣಿ ಸಂಖ್ಯೆಗಳನ್ನು ಎಲ್ಲಾ ಮೆಟ್ರೋ ನಿಲ್ದಾಣಗಳಲ್ಲಿ ಪ್ರಕಟಿಸಲಾಗಿರುತ್ತದೆ. ಹಾಗೂ ನಿಲ್ದಾಣ ನಿಯಂತ್ರಕರು ಮತ್ತು ರೈಲು ಚಾಲಕರಿಗೆ ತಜ್ಞ ವೈದ್ಯರಿಂದ ಪ್ರಥಮ ಚಿಕಿತ್ಸೆ ಮತ್ತು ಸಿ.ಪಿ.ಆರ್ ನೀಡಲು ಸೂಕ್ತ ತರಬೇತಿಯನ್ನು ನೀಡಲಾಗಿರುತ್ತದೆ.<br><br>ಇದಲ್ಲದೆ, ಮೆಟ್ರೋ ನಿಲ್ದಾಣಗಳ ಹತ್ತಿರ ನಾನಾ ಆಸ್ಪತ್ರೆಗಳಿದ್ದು, ಅಂತಹ ಆಸ್ಪತ್ರೆಗಳ ದೂರವಾಣಿ ಸಂಖ್ಯೆಗಳನ್ನು ಮೆಟ್ರೋ ನಿಲ್ದಾಣಗಳಲ್ಲಿ ಸೂಚಿಸಲಾಗಿದ್ದು, ಪ್ರತ್ಯೇಕ ವೈದ್ಯರು ಮತ್ತು ಸಿಬ್ಬಂದಿಗಳನ್ನು ನೇಮಿಸುವ ಅವಶ್ಯಕತೆ ಇಲ್ಲವಾಗಿದೆ. |
| ಇ) | ವಾಹನ ಪಾರ್ಕಿಂಗ್ ಶುಲ್ಕವನ್ನು ಸಾರ್ವಜನಿಕರ ಒತ್ತಾಯದ ಮೇರೆಗೆ ಕಡಿಮೆಗೊಳಿಸಲು ಕ್ರಮ ಕೈಗೊಳ್ಳಲಾಗಿದೆಯೇ? | ಬೇರೆ ಸಂಸ್ಥೆಗಳು ನಿಗದಿಪಡಿಸಿರುವ ಪಾರ್ಕಿಂಗ್ ಶುಲ್ಕಕ್ಕೆ ಹೋಲಿಸಿದಾಗ ಬಿ.ಎಂ.ಆರ್.ಸಿ.ಎಲ್ ಕಡಿಮೆ ಪಾರ್ಕಿಂಗ್ ಶುಲ್ಕವನ್ನು ನಿಗದಿಪಡಿಸಿದೆ. ಆದಕಾರಣ ಪ್ರಸ್ತುತ ನಿಗದಿಪಡಿಸಿರುವ ಶುಲ್ಕವನ್ನು ಕಡಿಮೆ ಮಾಡುವ ಪ್ರಸ್ತಾವನೆ ಇರುವುದಿಲ್ಲ. |

ಕಡತ ಸಂಖ್ಯೆ: ನಅಇ 24 ಪಿ.ಆರ್.ಜೆ 2024

**(ಡಿ. ಕೆ. ಶಿವಕುಮಾರ್)**
ಉಪ ಮುಖ್ಯಮಂತ್ರಿ